# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1016
ಸದಸ್ಯರ ಹೆಸರು : ಡಾ|| ಜೈಮಾಲ ರಾಮಚಂದ್ರ
(ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 12.03.2020.
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕನ್ನಡ ಚಿತ್ರರಂಗದ ಸಮಗ್ರ ಚಲನಚಿತ್ರ ನೀತಿ ವರದಿ ಸರ್ಕಾರಕ್ಕೆ ನೀಡಲಾಗಿದೆಯೇ; | ಕನ್ನಡ ಚಲನಚಿತ್ರ ನೀತಿ-2011ರ ಪರಿಷ್ಕರಣೆಗಾಗಿ ಎಸ್.ವಿ ರಾಜೇಂದ್ರ ಸಿಂಗ್ ಬಾಬು ಇವರ ಅಧ್ಯಕ್ಷತೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 27 ಪಿಐಎಫ್ 2015, ದಿ:20.08.2015ರ ಮೂಲಕ ರಚಿಸಲ್ಪಟ್ಟ ಸಮಿತಿಯು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಈ ವರದಿಯ ಮೇರೆಗೆ ಕನ್ನಡ ಚಲನಚಿತ್ರ ನೀತಿ ಪರಿಷ್ಕರಣೆ ಪ್ರಕ್ರಿಯೆಯು ಪರಿಶೀಲನೆಯಲ್ಲಿದೆ. |
| (ಆ) | ಈ ವರದಿಯ ಸಮಗ್ರ ನೀತಿಯನ್ನು ಅನುಷ್ಠಾನಕ್ಕೆ ತರಲಾಗಿದೆಯೇ; | ಈ ವರದಿಯನ್ವಯ ಸಮಗ್ರ ಚಲನಚಿತ್ರ ನೀತಿಯನ್ನು ಅನುಷ್ಠಾನಕ್ಕೆ ತರುವ ಕುರಿತಂತೆ, ವರದಿಯಲ್ಲಿನ ಶಿಫಾರಸ್ಸುಗಳ ಮೇರೆಗೆ ಸಂಬಂಧಿಸಿದ ಇಲಾಖೆಗಳಿಂದ ಪಡೆಯಲಾಗಿರುವ ಅಭಿಪ್ರಾಯಗಳನ್ನು ಕ್ರೋಢೀಕರಿಸುತ್ತಿದ್ದು, ಪರಿಷ್ಕರಣೆ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |
| (ಇ) | 1975ರ ನಂತರ ಹೊಸ ಬಡಾವಣೆಗಳಲ್ಲಿ ಚಿತ್ರಮಂದಿರ ನಿರ್ಮಾಣಕ್ಕೆ ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು: | ನಿವೇಶನ ಹಂಚಿಕೆ ವಿಚಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲವಾದ್ದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಈ) | ಸಾರ್ವಜನಿಕರಿಗೆ ಅನುಕೂಲವಾಗುವಂತೆ ವಸತಿ ಬಡಾವಣೆಗಳಲ್ಲಿ ಚಿತ್ರಮಂದಿರ ನಿರ್ಮಾಣಗೊಳ್ಳಲು ಸರ್ಕಾರ ಚಿಂತಿಸಿದೆಯೇ; ಚಿಂತಿಸಿದ್ದಲ್ಲಿ, (Commercial Zone) ಎಂಬ ಪದವನ್ನು ವಿನಾಯಿತಿ ನೀಡಿ, ಚಿತ್ರಮಂದಿರ ನಿರ್ಮಾಣವಾಗಲು ಸರ್ಕಾರ ಯೋಚಿಸಿದೆಯೇ? | ಪ್ರಸ್ತಾಪ ಇರುವುದಿಲ್ಲವಾದ ಕಾರಣ ಪ್ರಶ್ನೆ ಉದ್ಭವಿಸುವುದಿಲ್ಲ. |

KCI-PIP/55/2020-INFO-KC-SEC

ಬಿ.ಎಸ್. ಯಡಿಯೂರಪ್ಪ
(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ